ಇಸ್ತಿಹಾರ್ ನಾಮೆಗಳು.

ತಾರೀಖು 1ನೇ ಆಗಸ್ಟು 1884.

ನಂ. 99.—ಸಕಲಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡೀ ಕಂಡ ತಖ್ತೇಯಲ್ಲಿ ನಮೂದಿಸಿದ ಪ್ರಕಾರ) ಕೆಲವು ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕೀ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡಿ ಗ್ರಾಮವು ವೃತ್ತೀವಾರು ಇದರಡೀಕಂಡ ತಖ್ತೇಯಲ್ಲಿ ನಮೂದಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜ್ ಮೂಲಕ ವಿಕ್ರಯಿಸಲ್ಪಡುವವು, ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜ್ ಪುರುವಾಗಿ, ಉಳಿಕೆ ಯಾವದೂ ಇಲ್ಲದೆ ವೃತ್ತಿಗಳು ಚಡ ದರಖಾಸ್ತುದಾರರಿಗೆ ಹರಾಜ್ ನಿಲ್ಲುವದು.

2. ಪರಂತು ಬಾಕೀ ಬರಬೇಕಾದ ವೃತ್ತಿಗಳು ಹರಾಜ್ ಮಾಡುವದರಿಂದ ಕಂದಾಯದಬಾಕೀ ಮೊಬಲಗು ಪೂರಾ ವಸೂಲಾಗದೇ ಯಿದ್ದರೆ ಪೂರಾ ಗ್ರಾಮವು ನಂತರ ವಿಕ್ರಯಿಸಲ್ಪಡುವದು.

3. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ್ ಪೈಕೀ ಶೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕೀ ಬಾಕೀಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತೀ ಮಾಡದೇ ಇದ್ದರೆ ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂತಾ ಡಿಪಾಜಿಟ್ ಮೊಬಲಗನ್ನು ಕೊಡದೇ ಹೋದರೆ, ಅಥವಾ ಬಾಕೀ ಕ್ರಯದ ಮೊಬಲಗನ್ನು ಪಾವತೀ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜ್ ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಪಡಿಸತಕ್ಕದ್ದು, ಹಾಗಿಲ್ಲದಪಕ್ಷಕ್ಕೆ ಅಂತವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫ಼ನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಬಡ್ಡೀ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕೀ ಮೊಬಲಗನ್ನು ಪೂರಾ ಹಾಜರ್ ಮಾಡಿದರೆ, ಹರಾಜ್ ಮುವ್ಕೂಫ಼ ಮಾಡಲ್ಪಡತಕ್ಕದ್ದು; ಪರಂತು ಹರಾಜಿಗೆ ಗೊತ್ತಾದ ದಿನಕ್ಕೆ ಹಿಂದಿನ ದಿನದ ಸೂರ್ಯಾಸ್ತಮಯಕ್ಕೆ ಮುಂಚಿತವಾಗಿ ಸದರೀ ಹಣ ಹಾಜರ್ ಮಾಡತಕ್ಕದ್ದು.

7. ಹರಾಜ್ ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜ್ ಕಾಯಮ್ಮಾದ್ದಾಗಿರುವದಿಲ್ಲ.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತೀ ಮಾಡಿ, ಹರಾಜನ್ನು ದಿವಾನರವರು ಕಾಯಂ ಮಾಡಿದ ಕೂಡ್ಲೆ ವೃತ್ತಿಗಳು ಆತನ ಸುಪರ್ದು ಮಾಡಲ್ಪಟ್ಟು ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಸಬ್ ಡಿವೀಜ್ ಆಫೀಸರರಿಂದ ರುಜು ಮೊಹರ್ ಮಾಡೋಕಾದ ಬಂದು ಸರ್ಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಸೀಲ್‌ನಲ್ಲಾಗಲ್ಲಿ ಅಂದಾಜು ಬೀಜವರೀ ವಿಷಯದಲ್ಲಾಗಲಿ ಇರುವ ಗಲ್ಲತ್‌ಗಳಿಗೆ ಸರ್ಕಾರದವರು ಜವಾಬ್‌ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು ಸದರೀ ಹರಾಜಿನಿಂದ ನುಕ್ಸಾ ಪಟ್ಟಂತೆ ಎಣಿಸುವ ಜನಗಳು, ಹರಾಜ್ ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ. ಅಂತಾ ಅಪ್ಪೀಲ್‌ನಲ್ಲಿ ಆಗುವ ಆಖೈರ್ ಹುಕುಮಿಗೆ ಸದರೀ ಕ್ರಯವು ಒಳಪಟ್ಟಿರುತ್ತೆ.

ತಿಪ್ಪಟೂರು ತಾಲ್ಲೂಕು.	ಹೋಬಳಿ.	ಗ್ರಾಮ.	ಜೋಡೀದಾರರ ಹೆಸರು.	ಅಂದಾಜು ಬೀಜವರೀ.	ಅಂದಾಜು ಹುಟ್ಟುವಳೀ ಯಾ ಜೇರೀಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.	ಯಾವಬಾಕೀಗೋಸ್ಕರ ಗ್ರಾಮ ಹರಾಜ್ ಮಾಡಲ್ಪಡುತ್ತೊ ಅಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
				ಖಂ. ಕೂ. ಪ	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ.	
ಕಡೂರು	ಪಾಪನಹಳ್ಳಿ	ಸಮುದ್ರವಳ್ಳಿ	ನರಸಿಹ್ಮಶಾಸ್ತ್ರಿ, ಇತರ 3 ಮಂದಿ	23 4 1	150 6 5	147 6 4	715 8 5	ಜಿಲ್ಲೆಯ ಅಮಲ್‌ದಾರ್ರ ಕಛೇರಿಯಲ್ಲಿ 1884ನೇ ಇಸವಿ ಸೆಪ್ಟಂಬರ್ 2ನೇ ನೆ ದಿನವೇ ಬೆ
		ಅಲದಹಳ್ಳಿ	ನರಸಿಹ್ಮಭಟ್ಟ ಇತರ 18 ಮಂದಿ.	31 2 4	234 3 10	230 10 2	926 12 5	